ಅಧ್ಯಕ್ಷರು : ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸುವ ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

ಶಾಸನ ರಚನೆ

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಪೌರಾಡಳಿತ, ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಬೆಂಗಳೂರು ಜಲಮಂಡಳಿ ಸಚಿವರು) : ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಪೌರನಿಗಮಗಳ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ :

2011 ನೇ ಸಾಲಿನ ಕರ್ನಾಟಕ ಪೌರನಿಗಮಗಳ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಎಸ್. ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಪೌರಾಡಳಿತ, ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಬೆಂಗಳೂರು ಜಲಮಂಡಳಿ ಸಚಿವರು) : ಮಾನ್ಯ ಅಧ್ಯಕ್ಷರೆ, 2011 ನೇ ಸಾಲಿನ ಕರ್ನಾಟಕ ಪೌರನಿಗಮಗಳ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು.

(1) ಕರ್ನಾಟಕ ಪೌರನಿಗಮಗಳ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2011

ಶ್ರೀ ಎಸ್. ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಪೌರಾಡಳಿತ, ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಬೆಂಗಳೂರು ಜಲಮಂಡಳಿ ಸಚಿವರು) : ಮಾನ್ಯ ಅಧ್ಯಕ್ಷರೆ, 2011 ನೇ ಸಾಲಿನ ಕರ್ನಾಟಕ ಪೌರನಿಗಮಗಳ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು : ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011 ನೇ ಸಾಲಿನ ಕರ್ನಾಟಕ ಪೌರನಿಗಮಗಳ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.